ದಿ: **05.02.2024** ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು

**ಪಾಟೀ ಸವಾಲು: ಶ್ರೀ ಹೆಚ್.ಎಸ್.ಎಂ ವಕೀಲರಿಂದ**

ದಾವಾ ಐಟಂ 2 ರಲ್ಲಿ 1 ನೇ ಪ್ರತಿವಾದಿಯೇ ಸ್ವಾಧೀನದಲ್ಲಿದ್ದಾರೆ ಎಂದರೆ ಸರಿ. ಅದು 1 ನೇ ಪ್ರತಿವಾದಿಯ ಸ್ವಯಾರ್ಜಿತ ಆಸ್ತಿ ಎಂದರೆ ಸರಿ. 1 ನೇ ಪ್ರತಿವಾದಿಯು ದಾವಾ ಸ್ವಾಧೀನದಲ್ಲಿದ್ದ ಕಾರಣ ಆತನ ಸ್ವಾಧೀನಕ್ಕೆ ತೊಂದರೆ ಕೊಡದಂತೆ ಮಾನ್ಯ ನ್ಯಾಯಾಲಯವು ಅಸಲು ದಾವಾ 85/2001 ರಲ್ಲಿ ಆದೇಶ ಮಾಡಿದೆ ಎಂದರೆ ನನಗೆ ಗೊತ್ತಿಲ್ಲ. ನಾನು ಮತ್ತು ಪ್ರತಿವಾದಿಗಳು ಒಟ್ಟು ಕುಟುಂಬದಲ್ಲಿ ಇರುವ ಬಗ್ಗೆ ದಾಖಲಾತಿ ಕೊಟ್ಟಿದ್ದೇನೆ. ನನಗೂ 1 ನೇ ಪ್ರತಿವಾದಿಗೂ ಯಾವುದೇ ಸಂಬಂಧವಿಲ್ಲ ಎಂದರೆ ಸುಳ್ಳು. ನಾನು ಮತ್ತು ಪ್ರತಿವಾದಿಗಳು ಒಂದೇ ಕುಟುಂಬದವರಲ್ಲ ಎಂದರೆ ಸರಿಯಲ್ಲ. ದಾವಾ ಐಟಂ 1 ರ ಆಸ್ತಿಯನ್ನು ಪುಟ್ಟಸ್ವಾಮಪ್ಪ ಮತ್ತು 1 ನೇ ಪ್ರತಿವಾದಿ 1989 ರಲ್ಲಿ ವಿಭಾಗ ಮಾಡಿಕೊಂಡು ಪ್ರತ್ಯೇಕ ವ್ಯವಹಾರ ಮಾಡುತ್ತಿದ್ದಾರೆ ಎಂದರೆ ಸರಿಯಲ್ಲ. ದಾವಾ ಆಸ್ತಿಯನ್ನು ಅಕ್ರಮವಾಗಿ ಲಪಟಾಯಿಸಲು ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆಃ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಸಾಕ್ಷಿಯ ಹೇಳಿಕೆಯನ್ನು ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇ ಎ ಒ

(ಶ್ರೀ. ಶಿವಕುಮಾರ ಜಿ.ಜೆ)
ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ,
ಗುಂಡ್ಲುಪೇಟೆ